## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.

| ಸಿ.ಸಿ.ನಂ. 2157/2025 | | | |
|---|---|---|---|
| ಸಾಕ್ಷಿದಾರರ ಹೆಸರು | ಕಿರಣ ಕುಮಾರ | | |
| ತಂದೇಃಹೆಸರು | ರಮಣಪ್ಪ | ಪಿಡಬ್ಲೂ಼: | 2 |
| ವಯಸ್ಸುಃ | 30 ವರ್ಷ | ಸಿಡಬ್ಲೂ಼: | 3 |
| ಉದ್ಯೋಗಃ | ವ್ಯಾಪಾರ | | |
| ವಾಸ ಸ್ಥಳಃ | ಚಿಂತಾಮಣಿ | | |

**ದಿನಾಂಕಃ 18-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದಃ-**

ಸಾಕ್ಷಿಗೆ ಸ್ಥಳ ಪಂಚನಾಮೆಯನ್ನು ತೋರಿಸಲಾಗಿ ಅದನ್ನು ಗುರುತಿಸಿರುತ್ತಾರೆ. ಅದನ್ನು 1 ವರ್ಷದ ಹಿಂದೆ ರಸ್ತೆಯಲ್ಲಿ ಮಾಡಿರುತ್ತೇನೆ. ಯಾವ ವಿಚಾಕ್ಕೆಂದು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಮಾಲು ಅಮಾನತ್ತು ಪಂಚನಾಮೆಯನ್ನು ತೋರಿಸಲಾಗಿ ಅದನ್ನು ಗುರುತಿಸಿರುತ್ತಾರೆ. ಅದನ್ನು 1 ವರ್ಷದ ಹಿಂದೆ ರಸ್ತೆಯಲ್ಲಿ ಮಾಡಿರುತ್ತೇನೆ. ಯಾವ ವಿಚಾಕ್ಕೆಂದು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ . ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು:: ಮಾನ್ಯ ಸ ಸ ಅ ರವರಿಂದ:–**

ದಿ: 09.05.2025 ರಂದು ಕೃಷ್ಣಪ್ಪ ರವರ ವಾಸದ ಮನೆಯ ಮುಂದೆ ನೀವು ಚಾಸಾ–1 ಮತ್ತು 2 ರವರ ಸಮಕ್ಷಮ ಚಾಸಾ–15 ರವರು ಮದ್ಯಾಹ್ನ 12.15 ಗಂಟೆಯಿಂದ 1.15 ಗಂಟೆಯವರೆಗೂ ನಿಪಿ–1 ರಂತೆ ಪಂಚನಾಮೆನ್ನು ತಯರಿಸಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನಾಂಕ ಮದ್ಯಾಹ್ನ 2.30 ರಿಂದ 3.15 ರವರಗೊ ಪೋಲಿಸ್ ಠಾಣೆಯಲ್ಲಿ ಚಾಸಾ–1 ಹಾಗೂ ಚಾಸಾ–2 ರವರ ಸಮಕ್ಷಮ ನಿಪಿ–2 ರಂತೆ ಅಮಾನತ್ತು ಪಂಚನಾಮೆಯನ್ನು ಜರುಗಿಸಿ ಒಂದು ತಾಳಿಯನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲದಲ್ಲಿ ಪೋಲಿಸ್ ಠಾಣೆಯಲ್ಲಿ ತೆಗೆದಿರುವ ಪೊಟೊದಲ್ಲಿರುವ ವ್ಯಕ್ತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಆ ಕೇಸಿನ ವಿಚಾರ ಎಲ್ಲಾ ಮಾಹಿತಿಯನ್ನು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ದಿ:09.05.2025 ರಂದು ಈಗ ಓದಿ ಹೇಳಿದಂತೆ ––––– ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೀರಾ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ–5 ಎಂದು ಗುರುತಿಸಲಾಯಿತು.

ಸಾಕ್ಷಿಗೆ ನಿಪಿ–3 ಅನ್ನು ನೋಡಿ ಗುರುತಿಸುತ್ತಾರೆ. ಸದರಿ ಪ್ರಕರಣದ ಮಾಹಿತಿ ಇದ್ದರೂ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಿ ಎಂದರೆ ಸರಿಯಲ್ಲ.

**ಸಿಡಬ್ಲೂ: 3**

**<u>ಪಾಟೀಸವಾಲು: ಶ್ರೀ.ಬಿ ಜೆ ಆರ್ ಆರೋಪಿ ಪರ ವಕೀಲರಿಂದ:–</u>**

ನಿಪಿ–3 ಎಲ್ಲಿ ಯಾರು ತೆಗೆದಿರುತ್ತಾರೆ ಎಂದು ನಿಮಗೆ ಗೊತ್ತಿಲ್ಲ ಎಂದರೆ ಗೊತ್ತಿಲ್ಲ. ನೀವು ಯಾವುದೇ ತರಹದ ಸಹಿ ಮಾಡಿಲ್ಲ ಹಾಗಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಹೌದು.

**<u>ಮರು ವಿಚಾರಣೆ ಇಲ್ಲ</u>**.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**Sd/-**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಿಂತಾಮಣಿ.